**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ,**

**ಹೊನ್ನಾವರ**

**ಫೌಜುದಾರಿ ಪ್ರಕರಣ ಸಂಖ್ಯೆ : 92/2020**

**ಚಾ.ಸಾಃ3, ಫ್ರಾ.ಸಾಃ1**

| | |
|---|---|
| ಸಾಕ್ಷಿದಾರನ ಹೆಸರು | ಕುಮಾರ ನಾಯ್ಕ |
| ತಂದೆಯ ಹೆಸರು | ಅನಂತ ನಾಯ್ಕ |
| ವಯಸ್ಸು | 49 ವರ್ಷಗಳು |
| ಉದ್ಯೋಗ | ಗುತ್ತಿಗೆದಾರ |
| ವಾಸ್ತವ್ಯ | ಚಂದಾವರ, ತಾಃ ಹೊನ್ನಾವರ |

**ಸಾಕ್ಷಿಯನ್ನು ದಿನಾಂಕಃ 30-07-2022 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ಸಾಕ್ಷಿಗೆ ಈ ಪ್ರಕರಣದ ಗುನ್ನೆ ಜಾಗೆ ಪಂಚನಾಮೆಯನ್ನು ತೋರಿಸಲಾಗಿ ಅದರ ಮೇಲಿನ ಸಹಿಯನ್ನು ತನ್ನದು ಎಂದು ತಿಳಿಸಿದ್ದರಿಂದ ಪಂಚನಾಮೆಯನ್ನು ನಿಪಿ-1 ಮತ್ತು ಅದರ ಮೇಲಿನ ಸಾಕ್ಷಿ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ಸದರಿ ಸಹಿಯನ್ನು ದಿನಾಂಕ 22-07-2019 ರಂದು ಚಂದಾವರದ ದುರ್ಗಾಪರಮೇಶ್ವರಿ ದೇವಸ್ಥಾನದಲ್ಲಿ ಕಳ್ಳತನವಾಗಿದ್ದಕ್ಕೆ ಸಂಬಂಧಿಸಿದಂತೆ ಸ್ಥಳದಲ್ಲೇ ಸಹಿ ವಾಡಿರುತ್ತೇನೆ. ಸ್ಥಳವನ್ನು ಚಾಸಾ-1 ವಿಷ್ಣು ನಾಯ್ಕ ತೋರಿಸಿರುತ್ತಾರೆ. ಆ ಸಂದರ್ಭದಲ್ಲಿ ನನ್ನ ಜೊತೆ ಚಾಸಾ-2 ಮತ್ತು ಪೋಲಿಸರು ಹಾಜರಿದ್ದರು. ಪಂಚನಾಮೆಯನ್ನು ಬರೆಯಲು ನಾನು ಮಾಹಿತಿ ನೀಡಿದ್ದು ಪೋಲಿಸರು ಅದನ್ನು ಬರದುಕೊಂಡಿರುತ್ತಾರೆ. ಪಂಚನಾಮೆ ಸಂದರ್ಭದಲ್ಲಿ ಪೋಲಿಸರು ದೇವಸ್ಥಾನದಲ್ಲಿ ಮತ್ತು ದೇವಸ್ಥಾನದ ಹಿಂದೆ ಕಾಣಿಕೆ ಡಬ್ಬಿ ಎಸೆದಿದ್ದ ಸ್ಥಳದಲ್ಲಿ ಛಾಯಾಚಿತ್ರಗಳನ್ನು ತೆಗೆಸಿರುತ್ತಾರೆ. ಅವುಗಳನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿ 3 ಛಾಯಾಚಿತ್ರಗಳಲ್ಲಿ ತನ್ನ ಇರುವಿಕೆಯನ್ನು ಗುರುತಿಸಿದ್ದರಿಂದ ಅವುಗಳನ್ನು ಕ್ರಮವಾಗಿ ನಿಪಿ-2 ರಿಂದ 4 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ**

ನಾನು ಸದರಿ ದೇವಸ್ಥಾನದ ಕಮಿಟಿಯ ಸದಸ್ಯ ಎಂದರೆ ಸರಿ. ಸದರಿ ದೇವಸ್ಥಾನದಲ್ಲಿ ದಿನಾಂಕ 17-07-2019 ರಂದು ರಾತ್ರಿ ಸಮಯದಲ್ಲಿ ಕಳ್ಳತನವಾಗಿರುತ್ತದೆ. ಚಾಸಾ-1 ದೇವಸ್ಥಾನದ ಕಮಿಟಿಯ ಅಧ್ಯಕ್ಷರಾಗಿದ್ದರು ಎಂದರೆ ಸರಿ. ನಮ್ಮ ದೇವಸ್ಥಾನದಲ್ಲಿ ಕಳ್ಳತನ ಆಗಿಲ್ಲ ಎಂದರೆ ಸರಿಯಲ್ಲ.

ಪೋಲಿಸರು ಸ್ಥಳಕ್ಕೆ ಬಂದಿಲ್ಲ ಮತ್ತು ಪಂಚನಾಮೆ ಮಾಡಿಲ್ಲ ಎಂದರೆ ಸರಿಯಲ್ಲ. ಛಾಯಾಚಿತ್ರಗಳನ್ನು ಕಳ್ಳತನಕ್ಕೆ ಸಂಬಂಧಿಸಿದಂತೆ ತೆಗೆಸಿಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**